**All India Radio: Bangalore**
**Regional Bulletin In Kannada**
**14.05.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**14.05.2025 / 2.30 p.m.**

# ಮುಖ್ಯಾಂಶಗಳು

೧. ಬೆಂಗಳೂರು ಹಾಗೂ ನೋಯಿಡಾದಲ್ಲಿ ಎನ್.ಎಂ.ಚಿಪ್ ವಿನ್ಯಾಸಕೇಂದ್ರ

೨. ಕೇಂದ್ರದ ಯೋಜನೆಗಳಿಗೆ ಕೇಂದ್ರದಿಂದ ಬಾರದ ಹಣ: ಸಭೆಯಲ್ಲಿ ಸಿಎಂ ಅಸಮಾಧಾನ

೩. ಕೊಪ್ಪಳ ಮಾವುಮೇಳ ಗಮನಸೆಳೆದ ಕೊಪ್ಪಳ ಕೇಸರಿ ಮಿಯಾವಾಕಿ ಮಾವು

೪. ಭಾರತದ ೫೨ನೇ ಮುಖ್ಯ ನ್ಯಾಯಮೂರ್ತಿಯಾಗಿ ಜಸ್ಟೀಸ್ ಭೂಷಣ್ ರಾಮಕೃಷ್ಣ ಗವಾಯ್ ಪ್ರಮಾಣ ವಚನ ಸ್ವೀಕಾರ

೫. ಸಿಂಗನೂರು ರಾಯಚೂರು ನಡುವೆ ನೂತನ ರೈಲು ಮಾರ್ಗಕ್ಕೆ ಶಂಕು ಸ್ಥಾಪನೆ

*************

ಬೆಂಗಳೂರು ಹಾಗೂ ನೋಯಿಡಾದಲ್ಲಿ ಅತ್ಯಾಧುನಿಕ ಭಾರತದ ಪ್ರಥಮ ಮೂರು ಎನ್ಎಮ್-ಚಿಪ್ ವಿನ್ಯಾಸ ಕೇಂದ್ರಗಳನ್ನು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಉದ್ಘಾಟಿಸಿದರು. ಭಾರತದಲ್ಲಿ ಮೊದಲ ಬಾರಿಗೆ ಮೂರು ನ್ಯಾನೋ ಮೀಟರ್ ಆಧುನಿಕ ಚಿಪ್ ವಿನ್ಯಾಸಗೊಳಿಸುವ ಈ ಕೇಂದ್ರಗಳು ಜಾಗತಿಕ ಸೆಮಿ ಕಂಡಕ್ಟರ್ ನಾವಿನ್ಯ ವಲಯದಲ್ಲಿ ಭಾರತ ಮೈಲಿಗಲ್ಲು ಸ್ಥಾಪಿಸುವ ಮೂಲಕ ತನ್ನ ಸ್ಥಾನವನ್ನು ಭದ್ರಪಡಿಸಿಕೊಳ್ಳಲಿದೆ ಎಂದರು. ಉತ್ತರಪ್ರದೇಶದಲ್ಲೂ ಸೆಮಿಕಂಡಕ್ಟರ್ ವಿನ್ಯಾಸ ಕೇಂದ್ರವನ್ನು ಆರಂಭಿಸಲಾಗುವುದು. ಇದು ದೇಶದ ಪ್ರತಿಭೆಗಳಿಗೆ ಪ್ಯಾನ್ ಇಂಡಿಯಾ ಪರಿಸರ ವ್ಯವಸ್ಥೆಯಲ್ಲಿ ಉಜ್ವಲ ಅವಕಾಶ ಒದಗಿಸಲಿದೆ. ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿ ಮೂಲಕ ಸಮಗ್ರ ಸೆಮಿಕಂಡಕ್ಟರ್ ಪರಿಸರ ವ್ಯವಸ್ಥೆಯನ್ನು ದೇಶದಲ್ಲಿ ಸ್ಥಾಪಿಸಲಾಗುತ್ತಿದೆ ಎಂದು ಹೇಳಿದರು. ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಸಂಕೀರ್ಣದಾಯಕ ಅಧ್ಯಯನ ಕೌಶಲ್ಯವನ್ನು ಅಭಿವೃದ್ಧಿಪಡಿಸಲು ಸೆಮಿಕಂಡಕ್ಟರ್ ಕಲಿಕಾ ಕಿಟ್ ಒದಗಿಸಲಾಗುವುದು. ೨೭೦ ಕ್ಕೂ ಅಧಿಕ ಶಿಕ್ಷಣ ಸಂಸ್ಥೆಗಳು ಈಗಾಗಲೇ ವಿದ್ಯುನ್ಮಾನ ವಿನ್ಯಾಸ ಸ್ವಯಂ ಚಾಲಿತ ತಂತ್ರಾಂಶ ಸಾಧನಗಳನ್ನು ಪಡೆದುಕೊಂಡಿವೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

*************

ಕೇಂದ್ರ ಸರ್ಕಾರದಿಂದ ಬರಬೇಕಾದ ಪಿಂಚಣಿ ಎರಡು ವರ್ಷದಿಂದ ರಾಜ್ಯಕ್ಕೆ ಕೊಟ್ಟಿಲ್ಲ. ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಕೇಂದ್ರದಿಂದ ಹಣ ಬಾರದೇ ಇರುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಸಮಾಧಾನ ವ್ಯಕ್ತಪಡಿಸಿದರು. ವಿಧಾನಸೌಧದ ಸಮ್ಮೇಳನ ಕೊಠಡಿಯಲ್ಲಿ ತಮ್ಮ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಮಟ್ಟದ ದಿಶಾ ಸಮಿತಿ ಸಭೆಯಲ್ಲಿ

ಮಾತನಾಡಿದರು. ರಾಜ್ಯ ಸರ್ಕಾರವೇ ಬಹುತೇಕ ಹಣ ಕೊಡುವ ಯೋಜನೆಗಳಿಗೆ ಪ್ರಧಾನಿ ಮತ್ತು ಕೇಂದ್ರದ ಹೆಸರಿದೆ. ಆದರೂ ಚೂರು, ಪಾರು ಶೇ ಕೇಂದ್ರದ ಹಣವೂ ಬರುತ್ತಿಲ್ಲ. ಈ ನಿರಂತರ ಅನ್ಯಾಯ ಪ್ರಶ್ನಿಸಬೇಕಲ್ಲವೇ ಎಂದರು. ಕೇಂದ್ರ ಸರ್ಕಾರಕ್ಕೆ , ಕೇಂದ್ರದ ಮಂತ್ರಿಗಳಿಗೆ ಮತ್ತು ಪ್ರಧಾನ ಮಂತ್ರಿಯವರಿಗೆ ರಾಜ್ಯ ಸರ್ಕಾರದಿಂದ ಮೇಲಿಂದ ಮೇಲೆ ಬರೆದ ಪತ್ರಗಳ ಮಾಹಿತಿ ನೀಡಿದ ಸಿಎಂ , ಪತ್ರವನ್ನು ಸಭೆಯಲ್ಲಿ ಓದಿ ಸಂಸದರ ಗಮನ ಸೆಳೆದರು. ೧೫ನೇ ಹಣಕಾಸು ಆಯೋಗದಲ್ಲಿ ೫೪೯೫ ಕೋಟಿ ರೂಪಾಯಿ ವಿಶೇಷ ಅನುದಾನ ಕೊಡಬೇಕು, ಕೆರೆ ಮತ್ತು ಫೆರಿಫೆರಲ್ ರಿಂಗ್ ರಸ್ತೆಗೆ ಕೊಡಬೇಕಾದ ಹಣ ಸೇರಿ ಒಟ್ಟು ೧೧೪೯೫ ಕೋಟಿ ರೂಪಾಯಿ ಕೇಂದ್ರದಿಂದ ಬರಬೇಕಿತ್ತು. ನಾವು ರಾಜ್ಯದಿಂದ ೪.೫ ಲಕ್ಷ ಕೋಟಿ ತೆರಿಗೆ ಕೊಟ್ಟರೂ ರಾಜ್ಯಕ್ಕೆ ಸಣ್ಣ ನೆರವೂ ಕೇಂದ್ರದಿಂದ ಬರುವುದಿಲ್ಲ, ಕೇಂದ್ರ ಪುರಸ್ಕೃತ ಯೋಜನೆಗಳಿಗೂ ಹಣ ಕೊಡುವುದಿಲ್ಲ, ಆದರೆ ಅಭಿವೃದ್ಧಿಗೆ ರಾಜ್ಯ ಸರ್ಕಾರದ ಬಳಿ ಹಣ ಇಲ್ಲ ಅಂತ ನೀವೇ ಹೊರಗೆ ಆರೋಪ ಮಾತಾಡ್ತೀರಿ ಎಂದು ಸಿಎಂ ಟೀಕಿಸಿದರು. ನಾನೇ ಎರಡು ಬಾರಿ ಭೇಟಿ ನಿರ್ಮಲಾ ಸೀತರಾಮನ್ ಅವರಿಗೆ ಭೇಟಿ ಮಾಡಿ ಮನವಿ ಮಾಡಿದರೂ ಕೊಡಲಿಲ್ಲ. ರಾಜ್ಯದ ಸಂಸದರು ಒಟ್ಟಾಗಿ ಇದನ್ನು ಕೊಡಿಸಲು ಯತ್ನಿಸಬೇಕು. ಇಷ್ಟು ದಿನಗಳೊಳಗೆ ನೀವು ಕೊಡಿಸಬೇಕಿತ್ತು. ಜವಾಬ್ದಾರಿಯಿಂದ ತಪ್ಪಿಸಿಕೊಳ್ಳಲು ಪ್ರಯತ್ನಿಸಬೇಡಿ ಎಂದು ಸಿಎಂ ತಿಳಿಸಿದರು. ರಾಜ್ಯ ಸರ್ಕಾರ ನಿರಂತರವಾಗಿ ಒಟ್ಟು ೫೬೬೫ ಕೋಟಿ ಪಿಂಚಣಿ ಕೊಡುತ್ತಲೇ ಬರುತ್ತದೆ. ಆದರೆ, ೫೫೯ ಕೋಟಿ ಮಾತ್ರ ಕೇಂದ್ರ ಸರ್ಕಾರ ಕೊಡುತ್ತದೆ. ಈ ಸಣ್ಣ ಮೊತ್ತವನ್ನೂ ಕೇಂದ್ರ ಸರ್ಕಾರಕ್ಕೆ ಕೊಡಲು ಸಾಧ್ಯವಾಗುತ್ತಿಲ್ಲ. ಇದನ್ನೂ ಕೇಂದ್ರ ಎರಡು ವರ್ಷಗಳಿಂದ ಬಾಕಿ ಉಳಿಸಿಕೊಂಡಿದೆ ಎಂದು ತಿಳಿಸಿದರು.

*************

ಜಸ್ಟೀಸ್ ಭೂಷಣ್ ರಾಮಕೃಷ್ಣ ಗವಾಯಿ ಇಂದು ಭಾರತದ ೫೨ ನೇ ಮುಖ್ಯ ನ್ಯಾಯಮೂರ್ತಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ರಾಷ್ಟ್ರಪತಿ ಭವನದಲ್ಲಿ ನಡೆದ ವಿಶೇಷ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ನ್ಯಾಯಮೂರ್ತಿ ಗವಾಯಿ ಅವರಿಗೆ ಪ್ರಮಾಣ ವಚನ ಬೋಧಿಸಿದರು. ಇವರ ಅಧಿಕಾರದ ಅವಧಿ ಇದೇ ವರ್ಷದ ನವೆಂಬರ್‌ನಲ್ಲಿ ಮುಕ್ತಾಯವಾಗಲಿದೆ. ನಿನ್ನೆ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿ ಸೇವೆ ಸಲ್ಲಿಸಿದ್ದ ಸಂಜೀವ್ ಖನ್ನಾ ನಿವೃತ್ತರಾದರು. ಇಂದಿನ ಸಮಾರಂಭದಲ್ಲಿ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವ ಸಂಪುಟದ ಸದಸ್ಯರು, ನ್ಯಾಯಾಂಗ ವಲಯದ ಗಣ್ಯರು ಉಪಸ್ಥಿತರಿದ್ದರು.

*************

ಹಣ್ಣುಗಳ ರಾಜ ಮಾವಿನ ಹಣ್ಣಿನ ತಳಿಗಳಲ್ಲಿ ಜಪಾನ ದೇಶದ ಮೀಯಾವಾಕಿ ತಳಿಯ ಮಾವಿನ ಹಣ್ಣು ಕೆ.ಜಿ.೨ಲಕ್ಷ ೫೦ ಸಾವಿರ ರೂಪಾಯಿ ಬೆಲೆಯಿದ್ದು ಈ ಮೀಯಾವಾಕಿ ಹಣ್ಣನ್ನು ಕೊಪ್ಪಳ ನಗರದಲ್ಲಿ ನಡೆಯುತ್ತಿರುವ ಮಾವು ಮೇಳದಲ್ಲಿ ಪ್ರದರ್ಶನಕ್ಕೆ ಇಟ್ಟು ರೈತರನ್ನು ಗ್ರಾಹಕರನ್ನು ಸೆಳೆಯುವ ಪ್ರಯತ್ನ ಮಾಡಲಾಗುತ್ತಿದೆ. ಕೊಪ್ಪಳ ಕೇಸರಿ ಎಂಬ ಹೊಸ ಬ್ರಾಂಡ್ ಸೃಷ್ಟಿಸಿದ ತೋಟಗಾರಿಕೆ ಇಲಾಖೆ ಗುಜರಾತ ಕೇಸರಿಗೆ ಶೆಡ್ಡು ಹೊಡೆದು ಮಾವಿನ ಹಣ್ಣಿನ ಸೀಜನಲ್ಲಿ ಎರಡು ತಿಂಗಳು ಮೊದಲೆ ಮಾರುಕಟ್ಟೆಗೆ ಬಿಡುಗಡೆ ಮಾಡಿದ್ದಾರೆ. ಕೊಪ್ಪಳ ಜಿಲ್ಲೆಯಿಂದ ದುಬೈ ಸೇರಿದಂತೆ ಹಲವಾರು ದೇಶಗಳಿಗೆ ಕೊಪ್ಪಳ ಕೇಸರಿ ಮಾವಿನ ಹಣ್ಣನ್ನು ರಫ್ತು ಮಾಡಿ ರೈತರು ಆರ್ಥಿಕ ಸಬಲರಾಗಿದ್ದು ಗ್ರಾಹಕರಿಗೆ ಕೈಗೆ ಎಟುಕುವ ದರದಲ್ಲಿ ಕೊಪ್ಪಳ ಕೇಸರಿ ಮಾವಿನ ಹಣ್ಣು ದೊರಕಿಸಿಕೊಡುವ ಉದ್ದೇಶದಿಂದ ರೈತರು ಮತ್ತು ತೋಟಗಾರಿಕೆ ಇಲಾಖೆಯ ಸಹಯೋಗದಲ್ಲಿ ೯ನೇ ವರ್ಷದ ಮಾವು ಮೇಳವನ್ನು ಮೇ.೧೩ ರಿಂದ ಮೇ೨೨ ರವರೆಗೆ ಮಾವು ಮೇಳವನ್ನು ಆಯೋಜಿಸಲಾಗಿದೆ.

ಬೈಟ್:ರಾಮಣ್ಣ ಚೌಡಕಿ. ರೈತರು ಇರಕಲಗಡ.

ಗ್ರಾಹಕರಿಗೆ ರಾಸಾಯನಿಕ ಮುಕ್ತ ಹಣ್ಣು ನೀಡುವ ಕೆಲಸವನ್ನು ತೋಟಗಾರಿಕೆ ಇಲಾಖೆಯ ಮತ್ತು ರೈತರು ಮಾಡಿದ್ದಾರೆ ಎಂದು ಯಲಬುರ್ಗಾ ತಾಲ್ಲೂಕಿನ ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಲಿಂಗನಗೌಡ ಪಾಟೀಲ ಹೇಳಿದ್ದಾರೆ.

ಬೈಟ್:- ಲಿಂಗನಗೌಡ ಪಾಟೀಲ ಹಿರಿಯ ಸಹಾಯಕ ನಿರ್ದೇಶಕ ತೋಟಗಾರಿಕೆ ಇಲಾಖೆಯ ಯಲಬುರ್ಗಾ.

*************

ನೈರುತ್ಯ ರೈಲ್ವೆ ವಿಭಾಗದಿಂದ ಮುನಿರಾಬಾದ್ ರಾಯಚೂರ ಹೊಸ ರೈಲು ಮಾರ್ಗದ ಯೋಜನೆಯಡಿ ಸಿಂಧನೂರು ರಾಯಚೂರು ನಡುವೆ ೮೧ ಕಿ.ಮೀ ನೂತನ ರೈಲು ಮಾರ್ಗ ನಿರ್ಮಾಣದ ಶಂಕುಸ್ಥಾಪನೆ ಕಾರ್ಯಕ್ರಮವು ಮೇ ೧೫ ರಂದು ಮಧ್ಯಾಹ್ನ ೨ ಗಂಟೆಗೆ ರಾಯಚೂರ ಜಿಲ್ಲೆಯ ಸಿಂಧನೂರು ರೈಲ್ವೆ ನಿಲ್ದಾಣದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮವನ್ನು ಭಾರತ ಸರ್ಕಾರದ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವರಾದ ವಿ.ಸೋಮಣ್ಣ ಹಾಗೂ ರಾಜ್ಯ ಸರ್ಕಾರದ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರಾದ ಡಾ. ಎಂ. ಬಿ. ಪಾಟೀಲ್ ಅವರು ಉದ್ಘಾಟಿಸಲಿದ್ದಾರೆ. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಇನ್ನಿತರರು ಭಾಗವಹಿಸುತ್ತಾರೆ.

*************

ಕಲಬುರಗಿ ನಗರದ ಎಂ ಎಸ್ ಕೆ ಮಿಲ್ ಬಳಿ ನಿರ್ಮಾಣವಾಗುತ್ತಿರುವ ಹಣ್ಣು ತರಕಾರಿ ಮಾರುಕಟ್ಟೆ ಕಟ್ಟಡವನ್ನು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಪರಿಶೀಲನೆ ನಡೆಸಿದರು. ತರಕಾರಿ ಮಾರಾಟಗಾರರಿಗೆ ಹಾಗೂ ಗ್ರಾಹಕರಿಗೆ ಅನುಕೂಲವಾಗುವ ರೀತಿ ಸೌಲಭ್ಯಗಳನ್ನು ಅದರಲ್ಲೂ ಮಹಿಳೆಯರಿಗೆ ಹಾಗೂ ಪುರುಷರಿಗೆ ಶೌಚಾಲಯ ನಿರ್ಮಾಣ, ವಾಹನ ನಿಲುಗಡೆಗೆ ಅಗತ್ಯ ಸ್ಥಳಾವಕಾಶ ಕಲ್ಪಿಸಲು ಸಲಹೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಕುಡಾ ಅಧ್ಯಕ್ಷ ಮಜರ್ ಆಲಂ ಖಾನ್, ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್, ಪೊಲೀಸ್ ಕಮೀಷನರ್ ಡಾ ಶರಣಪ್ಪ, ಎಸ್ ಪಿ ಅಡ್ಡೂರು ಶ್ರೀನಿವಾಸಲು, ಮಹಾನಗರ ಪಾಲಿಕೆ ಕಮೀಷನರ್ ಅವಿನಾಶ ಸಿಂಧೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

*************

ವಿಶೇಷಚೇತನರಿಗಾಗಿ ಸರ್ಕಾರ ನೀಡುವ ಶೇ.೫ರ ಅನುದಾನದ ಜೊತೆಗೆ ಕೌಶಲ್ಯ, ಉದ್ಯೋಗ ಮತ್ತು ಅರೋಗ್ಯ ಒದಗಿಸಿ ಅಧಿಕಾರಿಗಳು ವಿಶೇಷಚೇತನರ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಮಂಡ್ಯ ಜಿಲ್ಲಾಪಂಚಾಯತ್ ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಆರ್.ನಂದಿನಿ ಅಧಿಕಾರಿಗಳಿಗೆ ತಿಳಿಸಿದರು. ಮಂಡ್ಯ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಮಂಡ್ಯ ನಗರದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರದಲ್ಲಿ ಆಯೋಜಿಸಲಾಗಿದ್ದ "ವಿಕಲಚೇತನ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ -೨೦೧೬"ರ ಅನುಷ್ಠಾನ ಕುರಿತು ಜಿಲ್ಲೆ, ತಾಲೂಕು ಮತ್ತು ಗ್ರಾಮ ಪಂಚಾಯಿತಿ ಮಟ್ಟದ ಅನುಷ್ಠಾನ ಅಧಿಕಾರಿಗಳು ಹಾಗೂ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಮತ್ತು ಸ್ವಯಂಸೇವಾ ಸಂಸ್ಥೆಗಳ ಮುಖಂಡರುಗಳೊಂದಿಗೆ ಸಮಾಲೋಚನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಮಕ್ಕಳಿಗಾಗಿ ಏರ್ಪಡಿಸಲಾಗಿರುವ ಉಚಿತ ಬೇಸಿಗೆ ಶಿಬಿರದಲ್ಲಿ ಸುಮಾರು ೧೨,೦೦೦ ಮಕ್ಕಳು ಪಾಲ್ಗೊಂಡಿರುವುದಕ್ಕೆ ಸಂತಸ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಪುಷ್ಪ, ಸಹಾಯಕ ಕಾರ್ಯದರ್ಶಿ ಚಂದ್ರು, ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿ ಮಟ್ಟದ ಅನುಷ್ಠಾನ ಅಧಿಕಾರಿಗಳು ಮತ್ತು ವಿಶೇಷ ಚೇತನರ ಸಂಘ, ಸಂಸ್ಥೆಯ ಸದಸ್ಯರುಗಳು ಉಪಸ್ಥಿತರಿದ್ದರು.

*************